## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 74(47)
ಮಾನ್ಯ ಸದಸ್ಯರ ಹೆಸರು: ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 15.07.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; | ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿರುವ ಸರಕಾರಿ ಪ್ರಾಥಮಿಕ, ಪ್ರೌಢಶಾಲೆಗಳ ವಿವರ ಕೆಳಗಿನಂತಿವೆ.<br>**ಶಾಲೆಗಳ ವಿಧ** — **ಶಾಲೆಗಳ ಸಂಖ್ಯೆ**<br>ಪ್ರಾಥಮಿಕ — 41905<br>ಪ್ರೌಢ — 4850<br>ಒಟ್ಟು — 46755 |
| ಆ) | ಸದರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರ ಲಭ್ಯತೆ ಇದೆಯೇ; ಲಭ್ಯತೆ ಇಲ್ಲದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | 1. ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಪ್ರಾಥಮಿಕ ಶಾಲೆಗಳಿಗೆ 7500 ಹಾಗೂ ಪ್ರೌಢ ಶಾಲೆಗಳಿಗೆ 2500 ಒಟ್ಟಾರೆ 10000 ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ.<br>2. 2022-23 ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) ವೃಂದದ ಒಟ್ಟು 15000 ಹುದ್ದೆಗಳ ಭರ್ತಿಗೆ ದಿನಾಂಕ 21.03.2022 ರಂದು ಅಧಿಸೂಚಿಸಲಾಗಿತ್ತು. ಈ ಹುದ್ದೆಗಳಿಗೆ ಎದುರಾಗಿ ಒಟ್ಟು 13352 ಅಭ್ಯರ್ಥಿಗಳು ನಿಯಮಾನುಸಾರ ಅರ್ಹರಾಗಿದ್ದು, ಈ ಪೈಕಿ 12429 ಅಭ್ಯರ್ಥಿಗಳು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ ಮತ್ತು 11494 ಅಭ್ಯರ್ಥಿಗಳು ಈಗಾಗಲೇ ಶಾಲಾ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.<br>3. ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ಕ್ರಮವಾಗಿ 33863 ಹಾಗೂ 8954 (ಒಟ್ಟಾರೆ 42817) ಅತಿಥಿ ಶಿಕ್ಷಕರುಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ವರ್ಷದಂತೆ ಪ್ರಸ್ತುತ ಸಾಲಿನಲ್ಲಿಯೂ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ. |
| ಇ) | ಈ ಶಾಲೆಗಳಲ್ಲಿ ಅತಿಥಿ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದರೆ ಅವರ ಗೌರವಧನ ಹೆಚ್ಚಿಸುವ ಉದ್ದೇಶ ಸರ್ಕಾರದ ಪರಿಶೀಲನೆಯಲ್ಲಿದೆಯೇ; ಜಿಲ್ಲಾವಾರು ಮಾಹಿತಿ ನೀಡುವುದು? | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಅತಿಥಿ ಶಿಕ್ಷಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್‌ಇಎಸ್ 2022, ದಿನಾಂಕ: 18-06-2022ರ ಆದೇಶದನ್ವಯ ಗೌರವ ಸಂಭಾವನೆಯನ್ನು ಈಗಾಗಲೇ ಪರಿಷ್ಕರಿಸಲಾಗಿರುತ್ತದೆ. |

**ಇಪಿ 37 ಪಿಎಂಎ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು